ಆ) ಹಾಗಿದ್ದಲ್ಲಿ, ಅದರ ಉದ್ದೇಶವೇನು?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಸಾರಿಗೆ ಮಂತ್ರಿಗಳು).—

ಅ) ಮತ್ತು ಆ) **ಪರಿಶೀಲನೆಯಲ್ಲಿದೆ.**

ಕರ್ನಾಟಕ–ಮಹಾರಾಷ್ಟ್ರ ಗಡಿ ವಿಚಾರ

೯೮೨. **ಶ್ರೀ ಕೆ. ಬಿ. ಕೋಳಿವಾಡ (ರಾಣೆಬೆನ್ನೂರು).**— ಮಾನ್ಯ ಮುಖ್ಯ ಮಂತ್ರಿಗಳ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗಡಿ ವಿಚಾರ ಬಗೆಹರಿಸಲು ಕೇಂದ್ರ ಗೃಹ ಮಂತ್ರಿಗಳು ಕರ್ನಾಟಕ–ಮಹಾರಾಷ್ಟ್ರದ ಮುಖ್ಯ ಮಂತ್ರಿಗಳ ಸಭೆ ಕರೆದಿದ್ದರೇ.

ಆ) ಸದರಿ ಸಭೆಯಲ್ಲಿ ಕೈಗೊಂಡ ತೀರ್ಮಾನಗಳೇನು?

ಇ) ಈ ಬಗ್ಗೆ ರಾಜ್ಯದ ಮುಖ್ಯ ಮಂತ್ರಿಗಳು ತೆಗೆದುಕೊಂಡಿರುವ ನಿಲುವೇನು ?

ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯ ಮಂತ್ರಿಗಳು).—

ಅ), ಆ)

ಮತ್ತು ಇ) ಗಡಿ ವಿಷಯವನ್ನು ಚರ್ಚಿಸಲು, ಕೇಂದ್ರ ಗೃಹ ಮಂತ್ರಿಗಳು ಉಭಯ ರಾಜ್ಯಗಳ ಮುಖ್ಯ ಮಂತ್ರಿಗಳ ಸಭೆಯನ್ನು ದೆಹಲಿಯಲ್ಲಿ ದಿನಾಂಕ ೧೪–೧–೧೯೮೮ರಂದು ಕರೆದಿದ್ದರು. ಆದರೆ ಈ ಸಭೆ ನಡೆಯಲಿಲ್ಲ.

ಪೋಲೀಸ್ ಪಡೆಯ ಸಂಖ್ಯೆಯನ್ನು ಹೆಚ್ಚಿಸುವ ಬಗ್ಗೆ

೭೪೯. **ಶ್ರೀ ಜಿ. ರಾಮದಾಸ್ (ಹೊಸದುರ್ಗ).**— ಮಾನ್ಯ ಗೃಹಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದ ತಾಲ್ಲೂಕು ಕೇಂದ್ರಗಳಿಗೆ ಪೋಲೀಸ್ ಪಡೆಯ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರವು ಉದ್ದೇಶಿಸಿದೆಯೇ?

ಆ) ಹಾಗಿದ್ದಲ್ಲಿ ಬಹು ದಿನಗಳಿಂದಲೂ ಅತಿ ಕಡಿಮೆ ಸಂಖ್ಯೆಯಲ್ಲಿರುವ ಹೊಸದುರ್ಗ ಪೋಲೀಸ್ ಪಡೆಯನ್ನು ಹೆಚ್ಚಿಸಲು ಸರ್ಕಾರವು ಯಾವ ಕ್ರಮ ಕೈಗೊಳ್ಳುವುದೇ?

ಇ) ಹೊಸದುರ್ಗ ತಾಲ್ಲೂಕಿನಲ್ಲಿ ಹೊಸ ಪೋಲೀಸ್ ಠಾಣೆಗಳನ್ನು ಸ್ಥಾಪಿಸುವ ಯೋಜನೆ ಇದೆಯೇ

ಶ್ರೀ ಆರ್. ಎಲ್. ಜಾಲಪ್ಪ (ಗೃಹಮಂತ್ರಿಗಳು).—

ಅ) ಅಂತಹ ಉದ್ದೇಶ ಸದ್ಯಕ್ಕೆ ಸರ್ಕಾರಕ್ಕಿಲ್ಲ.

ಆ) ಮೇಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

ಇ) ಹೊಸದುರ್ಗ ತಾಲ್ಲೂಕಿನಲ್ಲಿ ಮಾತೋಡು ಔಟ್ ಪೋಸ್ಟ್ ಇದ್ದು ಪೋಲೀಸ್ ಠಾಣೆ ಸ್ಥಾಪಿಸುವ ಯೋಜನೆ ಇಲ್ಲ.

ಮಹಿಳಾ ಆರಕ್ಷಕ ಉಪ ನಿರೀಕ್ಷಕರ ವಿವರಗಳು

೧೦೧೦. **ಶ್ರೀ ಬಿ ಗುರುಪ್ರಸಾದ್ (ನೆಲಮಂಗಲ).**—ಮಾನ್ಯ ಗೃಹಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿರುವ ಮಹಿಳಾ ಆರಕ್ಷಕ ಉಪ ನಿರೀಕ್ಷಕರ ಸಂಖ್ಯೆ ಎಷ್ಟು ?